## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 365

ಸದಸ್ಯರ ಹೆಸರು : ಡಾ: ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ)

ಉತ್ತರಿಸುವ ದಿನಾಂಕ : 11.12.2024

ಉತ್ತರಿಸುವ ಸಚಿವರು : ಕಂದಾಯ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಚಿಕ್ಕಮಗಳೂರು ಮತ್ತು ಕೊಡಗು ಜಿಲ್ಲೆಗಳಲ್ಲಿ ಈಗಾಗಲೇ ಒತ್ತುವರಿ ಮಾಡಿ ಪ್ಲಾಂಟೇಷನ್ ಬೆಳೆ ಬೆಳೆಯುತ್ತಿರುವ ರೈತರಿಗೆ ಅದೇ ಜಮೀನುಗಳನ್ನು ಗುತ್ತಿಗೆ ಆಧಾರದಲ್ಲಿ 10 ಹೆಕ್ಟೇರ್‌ವರೆಗೆ ಗುತ್ತಿಗೆ ನೀಡಲು ಸರ್ಕಾರದಿಂದ ಅನುಮತಿ ನೀಡಲಾಗಿದೆಯೇ; | ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್‌ಡಿ 07 ಎಲ್‌ಜಿಪಿ 2023, ದಿನಾಂಕ: 12.03.2024ರನ್ವಯ ಸರ್ಕಾರಿ ಜಮೀನಿನಲ್ಲಿ ಪ್ಲಾಂಟೇಷನ್ ಬೆಳೆಗಳನ್ನು ಬೆಳೆಯುತ್ತಿರುವ ಬೆಳೆಗಾರರಿಗೆ ಗುತ್ತಿಗೆಗೆ ನೀಡಲು ಅವಕಾಶ ಕಲ್ಪಿಸಲಾಗಿದೆ. ದಿನಾಂಕ: 31.12.2024ರವರೆಗೆ ಅರ್ಜಿಗಳನ್ನು ಸ್ವೀಕರಿಸಲು ಕಾಲಾವಕಾಶವನ್ನು ವಿಸ್ತರಿಸಿ ಆರ್‌ಡಿ 07 ಎಲ್‌ಜಿಪಿ 2023, ದಿನಾಂಕ: 25.10.2024ರಂದು ಸುತ್ತೋಲೆಯನ್ನು ಹೊರಡಿಸಲಾಗಿರುತ್ತದೆ. |
| (ಆ) | ನೀಡಿದ್ದಲ್ಲಿ ಶರಾವತಿ, ಲಿಂಗನಮಕ್ಕಿ ಡ್ಯಾಂಗಳಿಂದ ಮುಳಗಡೆಯ ಸಮಯದಲ್ಲಿ ಶಿವಮೊಗ್ಗ ಜಿಲ್ಲೆಯಲ್ಲಿನ ಹಲವಾರು ಸಂತ್ರಸ್ತರು ಪ್ಲಾಂಟೇಷನ್ ಬೆಳೆಗಳನ್ನು ಬೆಳೆಯುತ್ತಿರುವುದರಿಂದ ಇದನ್ನು ಶಿವಮೊಗ್ಗ ಜಿಲ್ಲೆಗೂ ವಿಸ್ತರಿಸುವ ಯೋಜನೆ ಸರ್ಕಾರದ ಮುಂದಿದೆಯೇ; | ಶಿವಮೊಗ್ಗ ಜಿಲ್ಲೆಯಲ್ಲಿನ ಶರಾವತಿ ಮುಳುಗಡೆ ಸಂತ್ರಸ್ತರು ಪ್ಲಾಂಟೇಷನ್ ಬೆಳೆಗಳನ್ನು ಬೆಳೆದಿರುವುದು ಕಂಡುಬಂದಿರುವುದಿಲ್ಲ. |
| (ಇ) | ಹಾಗಿದ್ದಲ್ಲಿ ಯಾವ ಕಾಲಮಿತಿಯೊಳಗೆ ಕಾರ್ಯಗತ ಮಾಡಲಾಗುವುದು? | ಅನ್ವಯಿಸುವುದಿಲ್ಲ. |

(ಕಡತ ಸಂಖ್ಯೆ:ಆರ್‌ಡಿ 16 ಎಲ್‌ಜಿಓ 2024)

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು